**Bangalore**
**Regional News**
**10.06.2025 /2.30 P.M.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

<u>ಮುಖ್ಯಾಂಶಗಳು</u>

1. ಮುಡಾ ಪ್ರಕರಣ ; ಜಾರಿ ನಿರ್ದೇಶನಾಲಯದಿಂದ ೧೦೦ ಕೋಟಿ ಮೌಲ್ಯದ ೯೨ ಸ್ಥಿರಾಸ್ತಿ ಮುಟ್ಟುಗೋಲು
2. ಚಿನ್ನಸ್ವಾಮಿ ಕಾಲ್ತುಳಿತ ಪ್ರಕರಣ ; ಹೈಕಮಾಂಡ್‌ಗೆ ವಿವರಣೆ ನೀಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ
3. ರಾಜ್ಯ ಸರ್ಕಾರದ ವಿರುದ್ಧ ಪ್ರತಿಭಟನೆ ನಡೆಸಲು ಬಿಜೆಪಿ ನಿರ್ಧಾರ
4. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ದುರಂತ ಹಿನ್ನೆಲೆ ; ಭಾರತ ಹಾಗೂ ದಕ್ಷಿಣ ಆಫ್ರಿಕಾ ನಡುವಿನ ಪಂದ್ಯ ರಾಜ್‌ಕೋಟ್‌ಗೆ ಸ್ಥಳಾಂತರ
5. ಕರಾವಳಿ ಕರ್ನಾಟಕ ಮತ್ತು ಒಳನಾಡಿನಲ್ಲಿ ಇಂದು ಗುಡುಗು ಸಹಿತ ಭಾರೀ ಮಳೆ ; ಹವಾಮಾನ ಇಲಾಖೆ ಮುನ್ಸೂಚನೆ

<><><>

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ - ಮುಡಾ ಪ್ರಕರಣಕ್ಕೆ ಸಂಬಂಧಿಸಿದಂತೆ ೨೦೦೨ರ ಅಕ್ರಮ ಹಣ ವರ್ಗಾವಣೆ ತಡೆ ಕಾಯ್ದೆ ನಿಬಂಧನೆಗಳಡಿಯಲ್ಲಿ ಜಾರಿ ನಿರ್ದೇಶನಾಲಯ ಆಸ್ತಿಗಳನ್ನು ಮುಟ್ಟುಗೋಲು ಹಾಕಿಕೊಂಡಿದೆ. ನೂರು ಕೋಟಿ ರೂಪಾಯಿ ಮೌಲ್ಯದ ೯೨ ಸ್ಥಿರಾಸ್ತಿಗಳನ್ನು ತಾತ್ಕಾಲಿಕವಾಗಿ ಮುಟ್ಟುಗೋಲು ಹಾಕಿಕೊಳ್ಳಲಾಗಿದೆ ಎಂದು ಜಾರಿ ನಿರ್ದೇಶನಾಲಯ ಇಂದು ಬಿಡುಗಡೆ ಮಾಡಿದ ಅಧಿಕೃತ ಹೇಳಿಕೆಯಲ್ಲಿ ತಿಳಿಸಿದೆ. ಈ ೯೨ ಮುಡಾ ನಿವೇಶನಗಳ ಮುಟ್ಟುಗೋಲು ೩೦೦ ಕೋಟಿ ರೂಪಾಯಿ ಮಾರುಕಟ್ಟೆ ಮೌಲ್ಯ ಹೊಂದಿರುವ ೧೬೦ ಮುಡಾ ನಿವೇಶನಗಳ ಹಿಂದಿನ ಮುಟ್ಟುಗೋಲಿಗೆ ಮುಂದುವರೆದಿದೆ ಎಂದು ತಿಳಿಸಿದೆ. ಈವರೆಗೆ ತಾತ್ಕಾಲಿಕವಾಗಿ ಮುಟ್ಟುಗೋಲು ಹಾಕಿಕೊಂಡ ಒಟ್ಟು ಮೌಲ್ಯ ಸುಮಾರು ೪೦೦ ಕೋಟಿ ರೂಪಾಯಿ ಎಂದು ಇಡಿ ಸ್ಪಷ್ಟಪಡಿಸಿದೆ.

<><><>

ಬೆಂಗಳೂರಿನ ಕಾಲ್ತುಳಿತ ಪ್ರಕರಣದ ಕುರಿತಂತೆ ಪಕ್ಷದ ಹೈಕಮಾಂಡ್‌ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮಾಹಿತಿ ನೀಡಿದ್ದಾರೆ. ನವದೆಹಲಿಗೆ ತೆರಳಿರುವ ಅವರು, ಪಕ್ಷದ ವರಿಷ್ಠರನ್ನು ಭೇಟಿ ಮಾಡಿ ಇತ್ತೀಚಿನ ಬೆಳವಣಿಗೆ ಬಗ್ಗೆ ವಿವರಣೆ ನೀಡಿದ್ದಾರೆ. ಲೋಕಸಭಾ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಎಐಸಿಸಿ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರೊಂದಿಗೆ ಚರ್ಚೆ ನಡೆಸಿದ್ದಾರೆ. ಇದೇ ವೇಳೆ ವಿಧಾನಪರಿಷತ್ ಸದಸ್ಯರ ನೇಮಕಾತಿಗೆ ಸಂಬಂಧಪಟ್ಟಂತೆಯೂ ಹೈಕಮಾಂಡ್ ಮುಖ್ಯಮಂತ್ರಿ ಜೊತೆ ಚರ್ಚೆ ನಡೆಸಲಿದೆ.

<><><>

ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಸಂಭವಿಸಿದ ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದಂತೆ ಸಲ್ಲಿಸಲಾದ ಸ್ವಯಂ ಪ್ರೇರಿತ ಅರ್ಜಿಗೆ ರಾಜ್ಯ ಸರ್ಕಾರ ಮುಚ್ಚಿದ ಲಕೋಟೆಯಲ್ಲಿ ಉತ್ತರಿಸಲು ಉಚ್ಚನ್ಯಾಯಾಲಯ ಇಂದು ಅನುಮತಿ ನೀಡಿದೆ. ಈ ಪ್ರಕರಣದ ವಿಚಾರಣೆ ಗುರುವಾರ ನಡೆಯಲಿದೆ. ಕಾಲ್ತುಳಿತದ ಬಗ್ಗೆ ವರದಿ ಸಲ್ಲಿಸಲು ಅಡ್ವೊಕೇಟ್ ಜನರಲ್ ಸೋಮವಾರದವರೆಗೆ ಸಮಯ ಕೋರಿದ್ದಾರೆ. ಈ ಮನವಿಯನ್ನು ಪರಿಗಣಿಸಿದ ಹಂಗಾಮಿ ಮುಖ್ಯ

ನ್ಯಾಯಮೂತಿ ವಿ. ಕಾಮೇಶ್ವರ ರಾವ್ ಮತ್ತು ನ್ಯಾಯಮೂರ್ತಿ ಸಿ.ಎಂ. ಜೋಶಿ ಪೀಠವು ಗುರುವಾರ ಇಲ್ಲವೇ ಅದಕ್ಕೂ ಮೊದಲು ಮುಚ್ಚಿದ ಲಕೋಟೆಯಲ್ಲಿ ವರದಿ ಸಲ್ಲಿಸಬಹುದು ಎಂದು ಆದೇಶಿಸಿದೆ. ದುರಂತದ ಕಾರಣವನ್ನು ತಿಳಿಯಲು ಉಚ್ಚನ್ಯಾಯಾಲಯ ರಾಜ್ಯ ಸರ್ಕಾರಕ್ಕೆ ನೋಟಿಸ್ ನೀಡಿತ್ತು.

<><><><>

ಜನವಿರೋಧಿ ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಮತ್ತು ಕಾಂಗ್ರೆಸ್ ಸರಕಾರದ ವಿರುದ್ಧ ಬೃಹತ್ ಹೋರಾಟ ಮಾಡಲು ತೀರ್ಮಾನಿಸಲಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜನವಿರೋಧಿ ಕಾಂಗ್ರೆಸ್ ಸರಕಾರ ಕಿತ್ತೊಗೆಯುವವರೆಗೂ ಹೋರಾಟ ಮುಂದುವರೆಸಲು ನಿರ್ಧರಿಸಲಾಗಿದೆ. ಇದೇ ೧೩ರಂದು ಬೆಂಗಳೂರಿನ ಫ್ರೀಡಂ ಪಾರ್ಕಿನಲ್ಲಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ತಮ್ಮ ಜನಪ್ರಿಯತೆಗಾಗಿ ವಿಧಾನಸೌಧದ ಮುಂದೆ ಮುಖ್ಯಮಂತ್ರಿ ಸಿದ್ದರಾಮಯ್ಯ ಕಾರ್ಯಕ್ರಮ ಆಯೋಜಿಸಿದ್ದರು. ಚಿನ್ನಸ್ವಾಮಿ ಸ್ಟೇಡಿಯಂನಲ್ಲಿ ಡಿ.ಕೆ.ಶಿವಕುಮಾರ್ ಕಾರ್ಯಕ್ರಮ ಏರ್ಪಡಿಸಿದ್ದರು ಎಂದು ವಿಜಯೇಂದ್ರ ಆರೋಪಿಸಿದ್ದಾರೆ.

<><><><>

ಕಾಲ್ತುಳಿತ ಪ್ರಕರಣದ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆಯ ಆಡಳಿತಾತ್ಮಕ ಸ್ಥಿರತೆಯ ಬಗ್ಗೆ ಬಿಸಿಸಿಐ ಕಳವಳ ಹೊಂದಿದೆ. ಇದೇ ಕಾರಣದಿಂದಾಗಿ ಬೆಂಗಳೂರಿನಲ್ಲಿ ನಡೆಯಬೇಕಿದ್ದ ಭಾರತ ಎ, ದಕ್ಷಿಣ ಆಫ್ರಿಕಾ ಎ ನಡುವಿನ ಸರಣಿಯನ್ನು ರಾಜ್‌ಕೋಟ್‌ಗೆ ಸ್ಥಳಾಂತರಿಸಲಾಗಿದೆ. ದುರಂತದ ಬಳಿಕ ಬಿಸಿಸಿಐ ಪಂದ್ಯಗಳ ಸ್ಥಳಾಂತರಕ್ಕೆ ಮುಂದಾಗಿದೆ. ನವೆಂಬರ್ ೧೩ ರಿಂದ ೧೯ರವರೆಗೆ ಬೆಂಗಳೂರಿನ ಚಿನ್ನಸ್ವಾಮಿಯಲ್ಲಿ ಪಂದ್ಯವನ್ನು ಆಯೋಜನೆ ಮಾಡಲಾಗಿತ್ತು.

<><><><>

ಜಿ.ಕೆ.ವಿ.ಕೆಯ ಆಡಳಿತ ವ್ಯವಸ್ಥೆ ಹಾಗೂ ಘನತೆಗೆ ಕುಂದು ಉಂಟಾಗದಂತೆ ಮಂಡ್ಯದ ವಿ.ಸಿ.ಫಾರ್ಮ್ ನಲ್ಲಿ ಪ್ರಾರಂಭಗೊಂಡಿರುವ ಕೃಷಿ ವಿಶ್ವ ವಿದ್ಯಾಲಯಕ್ಕೆ ಅಗತ್ಯವಿರುವ ಸಿಬ್ಬಂದಿ ಹಾಗೂ ಇತರ ಸೌಕರ್ಯಗಳ ವರ್ಗಾವಣೆ ಮಾಡುವಂತೆ ಕೃಷಿ ಸಚಿವ ಎನ್. ಚಲುವರಾಯಸ್ವಾಮಿಯವರು ನಿರ್ದೇಶನ ನೀಡಿದ್ದಾರೆ. ಬೆಂಗಳೂರಿನ ಮಹಾತ್ಮ ಗಾಂಧಿ ಕೃಷಿ ವಿಶ್ವವಿದ್ಯಾಲಯದಿಂದ ಬೇರ್ಪಟ್ಟಿರುವ ಮಂಡ್ಯ ಕೃಷಿ ವಿಶ್ವವಿದ್ಯಾಲಯದ ಆಡಳಿತ ಚಟುವಟಿಕೆಗೆ ಅಗತ್ಯವಿರುವ ಮೂಲಭೂತ ಸೌಕರ್ಯ ಒದಗಿಸುವ ಕುರಿತು ಸಭೆ ನಡೆಸಿದ ಸಚಿವರು ಹಲವು ಸಲಹೆ ಸೂಚನೆಗಳನ್ನು ನೀಡಿದ್ದಾರೆ. ಜಿ.ಕೆ.ವಿ.ಕೆ ಅತ್ಯಂತ ಹಳೆಯ ಕೃಷಿ ವಿಶ್ವವಿದ್ಯಾಲಯವಾಗಿದ್ದು ವ್ಯವಸ್ಥಿತವಾಗಿ ಪ್ರಗತಿ ಕಂಡಿದೆ. ಅಲ್ಲದೇ ರಾಷ್ಟ್ರ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲೂ ಹೆಸರು ಮಾಡಿದೆ. ಅದರ ಮೌಲ್ಯ, ಬೆಳವಣಿಗೆ ಹಾಗೂ ಮಹತ್ವಕ್ಕೆ ಒಂದಿಷ್ಟು ದಕ್ಕೆಯಾಗದಂತೆ ಆಡಳಿತಾತ್ಮಕ ವಿಭಜನೆ ಕೈಗೊಳ್ಳುವಂತೆ ತಿಳಿಸಿದ್ದಾರೆ.

<><><><>

ಜೀವಾಂಮೃತ ಬಳಸುವ ಮೂಲಕ ಭೂಮಿಯ ಸೂಕ್ಷ್ಮ ಜೀವಿಗಳ ರಕ್ಷಣೆ ಮಾಡುವುದು ಅಗತ್ಯ ಎಂದು ಗಂಗಾವತಿ ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿ ಡಾ.ಜ್ಯೋತಿ ಅಭಿಪ್ರಾಯಪಟ್ಟಿದ್ದಾರೆ. ಕೊಪ್ಪಳ ಜಿಲ್ಲೆಯ ಹಿರೇಸಿಂಧೋಗಿ ಗ್ರಾಮದಲ್ಲಿ ವಿಕಸಿತ ಕೃಷಿ ಸಂಕಲ್ಪ ಅಭಿಯಾನದ ಹಿನ್ನೆಲೆಯಲ್ಲಿ ಮುಂಗಾರು ಹಂಗಾಮಿನ ಬೀಜ ಗೊಬ್ಬರ ಮತ್ತು ಬೀಜೋಪಚಾರ ಕುರಿತು ನಡೆದ ಪ್ರಚಾರ ಆಂದೋಲನದಲ್ಲಿ ಭಾಗವಹಿಸಿ ಅವರು ಮಾತನಾಡಿದರು

**ಧ್ವನಿ :- ಡಾ.ಜ್ಯೋತಿ ಕೃಷಿ ವಿಜ್ಞಾನಿ ಗಂಗಾವತಿ ಕೃಷಿ ವಿಜ್ಞಾನ ಕೇಂದ್ರ**

ದೆಹಲಿಯ ಪಶು ಸಂಗೋಪನೆ ವಿಭಾಗದ ಡಾ.ಎಸ್ ಮೊಂದಾಲಿ ಮಾತನಾಡಿ, ಹಾಲು ಮೊಟ್ಟೆ ಮತ್ತು ಮಾಂಸ ಉತ್ಪಾದನೆ ಯಲ್ಲಿ ಭಾರತ ಪ್ರಗತಿ ಸಾಧಿಸಿದೆ. ಇದು ಸುಸ್ಥಿರವಾಗಿರಬೇಕು ಎಂಬುದೇ ಕೇಂದ್ರ ಸರ್ಕಾರದ ಉದ್ದೇಶ ಉದ್ದೇಶವಾಗಿದೆ ಎಂದು ಹೇಳಿದರು.

<><><><>

ಪ್ರಧಾನಮಂತ್ರಿ ಮತ್ಸ್ಯ ಸಂಪದ ಯೋಜನೆಯಡಿ ಮೀನುಗಾರರು ಸಾಕಷ್ಟು ಅವಕಾಶಗಳನ್ನು ಪಡೆದುಕೊಳ್ಳಬಹುದು ಎಂದು ಬೆಂಗಳೂರಿನ ಭಾರತೀಯ ಕೀಟಶಾಸ್ತ್ರ ಅನ್ವಯಿಕ ಸಂಸ್ಥೆಯ ಮುಖ್ಯಸ್ಥ ಡಾ.ಸಾಗರ್ ತಿಳಿಸಿದ್ದಾರೆ. ದಾವಣಗೆರೆ ಜಿಲ್ಲೆ ಹೊನ್ನಾಳಿ ತಾಲ್ಲೂಕಿನ ಬೆಳಗುತ್ತಿ, ಕಂಚಿಕೊಪ್ಪ ಮತ್ತು ಮಲ್ಲಿಗೇನಹಳ್ಳಿಗಳಲ್ಲಿ ಹಮ್ಮಿಕೊಂಡಿದ್ದ ವಿಕಸಿತ ಕೃಷಿ ಸಂಕಲ್ಪ ಅಭಿಯಾನದಲ್ಲಿ ಮೀನುಗಾರರನ್ನು ಉದ್ದೇಶಿಸಿ ಮಾತನಾಡಿದ ಅವರು, ಪ್ರಧಾನ ಮಂತ್ರಿ ಮತ್ಸ್ಯ ಸಂಪದ ಯೋಜನೆ ಜಾರಿಯಾದ ಮೇಲೆ ದೇಶದ ಮೀನುಗಾರರ ಬದುಕ ಹಸನಾಗಿದೆ ಎಂದು ಹೇಳಿದ್ದಾರೆ.

<><><><>

ಮೈಸೂರು ನಗರದ ಅಂಬಾವಿಲಾಸ ಅರಮನೆ ಮೈದಾನದಲ್ಲಿ ವಿವಿಧ ಇಲಾಖೆಗಳ ಸಮನ್ವಯದೊಂದಿಗೆ ಇದೇ ೨೧ರಂದು ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಆಯೋಜಿಸಲಾಗುವುದು. ಇದಕ್ಕೆ ಬೇಕಾದ ಎಲ್ಲ ಸಿದ್ಧತೆಗಳನ್ನು ವ್ಯವಸ್ಥಿತವಾಗಿ ಮಾಡಿಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಡಾ.ಪಿ.ಶಿವರಾಜು ಸೂಚಿಸಿದ್ದಾರೆ. ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇಂದು ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಮೈಸೂರು ಯೋಗಕ್ಕೆ ಪ್ರಸಿದ್ಧವಾಗಿದ್ದು ಈ ಕಾರ್ಯಕ್ರಮಕ್ಕೆ ಹೆಚ್ಚು ಸಾರ್ವಜನಿಕರು ಭಾಗವಹಿಸುವುದು ಮುಖ್ಯವಾಗಿದೆ. ಇದಕ್ಕೆ ಬೇಕಾದ ಸಿದ್ಧತೆಯನ್ನು ಅಧಿಕಾರಿಗಳು ಮಾಡಿಕೊಳ್ಳಬೇಕು ಎಂದು ನಿರ್ದೇಶನ ನೀಡಿದ್ದಾರೆ.

<><><><>

ಕರಾವಳಿ ಕರ್ನಾಟಕ ಮತ್ತು ಕರ್ನಾಟಕದ ಒಳನಾಡಿನಲ್ಲಿ ಇಂದು ಭಾರಿ ಮಳೆ ಮತ್ತು ಗುಡುಗು ಸಹಿತ ಮಳೆಯಾಗುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಮಳೆಯ ಜೊತೆ ಗಾಳಿಯ ವೇಗ ೩೦ ರಿಂದ ೪೦ ಕಿಲೋಮೀಟರ್‌ವರೆಗೆ ಬೀಸಲಿದೆ. ಉತ್ತರಕನ್ನಡ, ದಕ್ಷಿಣಕನ್ನಡ, ಉಡುಪಿ, ಚಿಕ್ಕಮಗಳೂರು, ಕೊಡಗು, ಧಾರವಾಡ, ಹಾವೇರಿ, ಕೊಪ್ಪಳ ಜಿಲ್ಲೆಗಳ ಕೆಲವೆಡೆ ಭಾರೀ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ನಿರ್ದೇಶಕ ಸಿ.ಎಸ್. ಪಾಟೀಲ್ ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ.

**ಧ್ವನಿ : ಸಿ.ಎಸ್. ಪಾಟೀಲ್**

ಮುಂಗಾರು ಮಳೆಗಾಲದ ಅವಧಿಯಲ್ಲಿ ಮೀನುಗಳು ವಂಶಾಭಿವೃದ್ಧಿ ಚಟುವಟಿಕೆಗಳು ನಡೆಸುವುದರಿಂದ ಪ್ರತೀ ವರ್ಷದ ಜೂನ್ ೦೧ ರಿಂದ ಜುಲೈ ೩೦ ರವರೆಗೆ ರಾಜ್ಯದ ಎಲ್ಲಾ ಸರ್ವಋತು ಕೆರೆಗಳು, ಜಲಾಶಯಗಳು, ತೊರೆಗಳು, ಅಳಿವೆಗಳು ಮತ್ತು ನದಿಗಳಲ್ಲಿ ಮೀನು ಹಿಡಿಯುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿರುತ್ತದೆ ಎಂದು ಮೀನುಗಾರಿಕೆ ಉಪ ನಿರ್ದೇಶಕ ಶಿವಕುಮಾರ್ ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>